# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಠೊಡ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ

---

**ವಿಷಯ**

ಬೆಳಗಾವಿ ಜಿಲ್ಲೆಯಲ್ಲಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಿಂದ ಬೇರ್ಪಟ್ಟು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನಲ್ಲಿ ಹೊಸದಾಗಿ ಆರಂಭವಾಗುತ್ತಿರುವ ವಿಶ್ವವಿದ್ಯಾಲಯಕ್ಕೆ ವಿಜಯಪುರ ಜಿಲ್ಲೆಯ 130ಕ್ಕೂ ಹೆಚ್ಚು ಪದವಿ ಮಹಾವಿದ್ಯಾಲಯಗಳು ಹಾಲಿ ಬೆಳಗಾವಿ ಜಿಲ್ಲೆಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಒಳಪಟ್ಟಿದೆ. ಸದರಿ ವಿಜಯಪುರ ಜಿಲ್ಲೆಯಿಂದ ಬೆಳಗಾವಿಗೆ ಬರಲು ಸುಮಾರು 200 ರಿಂದ 300 ಕಿಲೋಮೀಟರ್ ನಷ್ಟು ಅಂತರ ವಿರುವುದರಿಂದ ಪ್ರತಿಬಾರಿ ಬೆಳಗಾವಿಗೆ ಬಂದು ಕಛೇರಿ ಕೆಲಸ ಹಾಗೂ ಇನ್ನಿತರೆ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ದಾಖಲಾತಿಗಳನ್ನು ಪಡೆಯಲು ದೂರವಾಗಿರುವುದರಿಂದ ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಹಾಗೂ ಸದರಿ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಶಿಕ್ಷಣ ಸಂಸ್ಥೆಗಳಿಗೆ ಅನಾನುಕೂಲವಾಗಿರುತ್ತದೆ. ಈ ಕಾರಣದಿಂದ ವಿಜಾಪುರ ಜಿಲ್ಲೆಯ ಎಲ್ಲಾ ಕಾಲೇಜುಗಳನ್ನು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನಲ್ಲಿ ಹೊಸದಾಗಿ ಆರಂಭವಾಗುತ್ತಿರುವ ವಿಶ್ವವಿದ್ಯಾಲಯಕ್ಕೆ ಸೇರಿಸಬೇಕೆಂಬ ಸಲುವಾಗಿ ದಿನಾಂಕ 20.02.2023ರಲ್ಲಿ ನಿಯಮ 72 ಅಡಿಯಲ್ಲಿ ಸದಸನದಲ್ಲಿ ಗಮನವನ್ನು ಸೆಲೆಯಲು ಬಯಸುತ್ತೇನೆ.

**ಉತ್ತರ :**

ಬೆಳಗಾವಿಯಲ್ಲಿ ಕೇಂದ್ರ ಸ್ಥಾನವನ್ನು ಹೊಂದಿರುವ ಮತ್ತು ಬೆಳಗಾವಿ ಹಾಗೂ ವಿಜಯಪುರ ಜಿಲ್ಲೆಗಳ ಪ್ರದೇಶದ ಮೇಲೆ ಪ್ರಾದೇಶಿಕ ಅಧಿಕಾರ ಕ್ಷೇತ್ರ ವ್ಯಾಪ್ತಿಯನ್ನು ಹೊಂದಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಸುಸಜ್ಜಿತ ಆಡಳಿತ ವ್ಯವಸ್ಥೆ ಹಾಗೂ ಸಂಪನ್ಮೂಲ ಹೊಂದಿರುವ ವಿಶ್ವವಿದ್ಯಾಲಯವಾಗಿರುತ್ತದೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕೇಂದ್ರ ಸ್ಥಾನವಾಗಿರುವ ಬೆಳಗಾವಿಯಿಂದ ದೂರದಲ್ಲಿರುವ ವಿಜಯಪುರ ಜಿಲ್ಲೆ ಹಾಗೂ ತಾಲ್ಲೂಕುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಒತ್ತಾಸೆಯನ್ನು ವಿಜಯಪುರ ಜಿಲ್ಲೆಯ ತೊರವಿಯಲ್ಲಿರುವ ಸ್ನಾತಕೋತ್ತರ ಕೇಂದ್ರವು ಸಮರ್ಪಕವಾಗಿ ಈಡೇರಿಸುತ್ತಿದೆ.

ಅಲ್ಲದೆ, ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿರುವ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಬೇರ್ಪಟ್ಟ ನೂತನ ಬಾಗಲಕೋಟೆ ವಿಶ್ವವಿದ್ಯಾಲಯದ ಕೇಂದ್ರ ಸ್ಥಾನವನ್ನು ಜಮಖಂಡಿ, ಬಾಗಲಕೋಟೆ ಇಲ್ಲಿ, ಸ್ಥಾಪಿಸಲಾಗಿರುತ್ತದೆ. ಬಾಗಲಕೋಟೆ ಜಿಲ್ಲೆಯ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯ ಕಾಲೇಜುಗಳು

...2

ಮಾತ್ರ ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಳ್ಳುತ್ತವೆ. ಆದುದರಿಂದ ವಿಜಯಪುರ ಜಿಲ್ಲೆಯಲ್ಲಿನ ಕಾಲೇಜುಗಳನ್ನು ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಸಂಯೋಜಿಸುವ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತುತ ಪರಿಶೀಲನೆ ಹಂತದಲ್ಲಿರುತ್ತದೆ.

**ಸಂಖ್ಯೆ : ಇಡಿ/ 111 /ಯುಆರ್‌ಸಿ/2023**

**(ಡಾ. ಅಶ್ವತ್ಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ – ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು